ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿಲೀನ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) -

43 (254) ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ಸಿಬ್ಬಂದಿಗಳನ್ನು ಆಯಾ ಇಲಾಖಾ ಸಿಬ್ಬಂದಿಗಳಾಗಿ ವಿಲೀನಗೊಳಿಸುವ ಕುರಿತು ಸರ್ಕಾರದ ನಿಲುವೇನು ;

(ಆ) ಇದೇ ಕ್ರೈಸ್ ಅಡಿ ಕಾರ್ಯನಿರ್ವಹಿಸುತ್ತಿದ್ದ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ಶಾಲೆಗಳ ಸಿಬ್ಬಂದಿಗಳನ್ನು ಅಲ್ಪಸಂಖ್ಯಾತ ಕಲ್ಯಾಣ ಇಲಾಖಾ ಸಿಬ್ಬಂದಿಗಳನ್ನಾಗಿ ಪರಿಗಣಿಸಲಾಗಿದ್ದು, ಇದೇ ಮಾದರಿಯಲ್ಲಿ ಸಮಾಜಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಿಬ್ಬಂದಿಗಳನ್ನು ವಿಲೀನ ಮಾಡಲು ತಾರತಮ್ಯ ಮಾಡುತ್ತಿರುವುದಕ್ಕೆ ಕಾರಣಗಳೇನು ;

(ಇ) ಇದನ್ನು ಸರಿಪಡಿಸಲು ಸರ್ಕಾರವು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ? (ಸಂಪೂರ್ಣ ವಿವರ ನೀಡುವುದು)